# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **2341**

**ಮಾನ್ಯ ಸದಸ್ಯರ ಹೆಸರು** : **ಶ್ರೀ ಎಂ. ನಾಗರಾಜು**

**ಉತ್ತರಿಸುವ ದಿನಾಂಕ** : **27.03.2026**

**ಉತ್ತರಿಸುವ ಸಚಿವರು** : **ಗೃಹ ಸಚಿವರು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಆನ್ ಲೈನ್ (ಡಿಜಿಟಲ್) ಬೆದರಿಕೆಗಳ ಹಿನ್ನಲೆಯಲ್ಲಿ ಮಕ್ಕಳ ರಕ್ಷಣಾ ಸೇವೆಗಳನ್ನು ಬಲಪಡಿಸಲು ಮತ್ತು ಮಕ್ಕಳಿಗೆ ಇಂಟರ್ನೆಟ್ ಸುರಕ್ಷತೆಯ ಕುರಿತು ಉತ್ತೇಜಿಸಲು ಸರ್ಕಾರ ಯಾವ ಹೊಸ ಕ್ರಮಗಳನ್ನು ಕೈಗೊಂಡಿದೆ. | **ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಆನ್‌ಲೈನ್ (ಡಿಜಿಟಲ್) ಬೆದರಿಕೆಗಳ ಹಿನ್ನಲೆಯಲ್ಲಿ ಮಕ್ಕಳ ರಕ್ಷಣಾ ಸೇವೆಗಳನ್ನು ಬಲಪಡಿಸಲು ಮತ್ತು ಮಕ್ಕಳಿಗೆ ಇಂಟರ್ನೆಟ್ ಸುರಕ್ಷತೆಯ ಕುರಿತು ಉತ್ತೇಜಿಸಲು ಕೆಳಕಂಡ ಹೊಸ ಕ್ರಮಗಳನ್ನು ಕೈಗೊಂಡಿದೆ:-**<br><br>➢ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವಿಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ.<br><br>➢ ಸೈಬರ್ ಜಾಗೃತಿ ಸಪ್ತಾಹವನ್ನು ಆಚರಿಸುವ ಮೂಲಕ ಕರಪತ್ರಗಳನ್ನು ಮುದ್ರಿಸಿ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ಅರಿವನ್ನು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>➢ ನಿರಂತರವಾಗಿ ಪೊಲೀಸ್ ಅಧಿಕಾರಿ/ಸಿಬ್ಬಂದಿಯವರು ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ಹೆಚ್ಚಾಗುತ್ತಿರುವ ಆನ್‌ಲೈನ್ (ಡಿಜಿಟಲ್) ಬೆದರಿಕೆಗಳ ಬಗ್ಗೆ, ಆನ್‌ಲೈನ್ ವಂಚನೆ ಪ್ರಕರಣಗಳ ಬಗ್ಗೆ, ಮಕ್ಕಳಿಗೆ ಇಂಟರ್ನೆಟ್ ಬಳಸುವಾಗ ಎದುರಾಗುವ ಅಪಾಯಗಳ ಬಗ್ಗೆ ಅರಿವು ಮೂಡಿಸಲು ಮತ್ತು ಸುರಕ್ಷಿತ ಅಂತರ್‌ಜಾಲ ಬಳಕೆಯನ್ನು ಉತ್ತೇಜಿಸಲು ಮಕ್ಕಳಲ್ಲಿ ಜಾಗೃತಿ ಮೂಡಿಸುವ ಬಗ್ಗೆ ಕ್ರಮ ಕೈಗೊಂಡಿರುವುದಾಗಿದೆ.<br><br>➢ ಅಧಿಕಾರಿ ಮತ್ತು ಸಿಬ್ಬಂದಿಗಳು ಶಾಲಾ ಕಾಲೇಜುಗಳಿಗೆ ಪ್ರತಿ ತಿಂಗಳು ಭೇಟಿ ನೀಡಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ ಹಾಗೂ ಶಾಲಾ ಆಡಳಿತ ಮಂಡಳಿಯ ಸಿಬ್ಬಂದಿಗೆ ಶಾಲಾ ಮಕ್ಕಳ ಪೋಷಕರಿಗೆ ಸಭೆ ಕರೆದಾಗ ಮಕ್ಕಳಿಗೆ ಮೊಬೈಲ್ ನೀಡದಂತೆ ಪೋಷಕರಿಗೆ ತಿಳುವಳಿಕೆ ನೀಡಲು ಸೂಚಿಸಲಾಗಿರುತ್ತದೆ.<br><br>➢ ಪ್ರತಿ ಗುರುವಾರ ತೆರೆದ ಮನೆ ಕಾರ್ಯಕ್ರಮ ಮೂಲಕ ಮಕ್ಕಳಿಗೆ ಮೊಬೈಲ್ ಬಳಕೆಯಿಂದ ಉಂಟಾಗುವ |

| | | |
|---|---|---|
| | | ದುಷ್ಪರಿಣಾಮಗಳ ಬಗ್ಗೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br><br>➢ “ಅಕ್ಕಪಡೆ”ಯ ಮೂಲಕ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br><br>➢ ಮಕ್ಕಳಿಗೆ ಆನ್‌ಲೈನ್ ಅಪಾಯಗಳ ಕುರಿತು ಅರಿವು ಮೂಡಿಸಲು ಜಾಗೃತಿ ಅಭಿಯಾನಗಳು, ಕಾರ್ಯಾಗಾರಗಳು ಮತ್ತು ಸಮುದಾಯ ಮಟ್ಟದ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.<br><br>➢ ಆನ್‌ಲೈನ್ (ಡಿಜಿಟಲ್) ಬೆದರಿಕೆಗಳ ಬಗ್ಗೆ, ಅದರ ಪರಿಣಾಮಗಳ ಬಗ್ಗೆ ಮತ್ತು ಇಂತಹ ಸಂದರ್ಭಗಳಲ್ಲಿ ದೂರು ನೀಡಲು ಮಕ್ಕಳ ಸಹಾಯವಾಣಿ **1930 & 1098** ಮತ್ತು ಸುರಕ್ಷತಾ ಕ್ರಮಗಳ ಬಗ್ಗೆ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ “ಕಾನೂನು ಅರಿವು ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಂಡು ಜಾಗೃತಿ ಮೂಡಿಸಲಾಗುತ್ತಿದೆ.<br><br>➢ ಆನ್‌ಲೈನ್ ಸುರಕ್ಷತೆಯ ಬಗ್ಗೆ ಸ್ಪರ್ಧೆಗಳನ್ನು ಆಯೋಜಿಸಿ, ಮಕ್ಕಳಲ್ಲಿ ಆನ್‌ಲೈನ್ ಸುರಕ್ಷತೆಯ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br><br>➢ 'ಮೊಬೈಲ್ ಬಿಡಿ, ಪುಸ್ತಕ ಹಿಡಿ' ಅಭಿಯಾನ: ಮಕ್ಕಳಲ್ಲಿ ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಓದುವ ಹವ್ಯಾಸ ಮತ್ತು ದೈಹಿಕ ಚಟುವಟಿಕೆಗಳನ್ನು ಉತ್ತೇಜಿಸಲು ಈ ಅಭಿಯಾನವನ್ನು ಪ್ರಾರಂಭಿಸಲಾಗಿದೆ.<br><br>➢ ಡಿಜಿಟಲ್ ನಾಗರಿಕ **(Digital Nagarik):** ಐಟಿ-ಬಿಟಿ ಇಲಾಖೆಯು ಮೆಟಾ **(Meta)** ಸಂಸ್ಥೆಯ ಸಹಯೋಗದೊಂದಿಗೆ ಶಿಕ್ಷಕರಿಗೆ ಡಿಜಿಟಲ್ ಸುರಕ್ಷತೆ ಮತ್ತು ಸೈಬರ್ ಸುರಕ್ಷತೆಯ ಬಗ್ಗೆ ತರಬೇತಿ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.<br><br>➢ ಪೋಷಕರಿಗೆ ಮತ್ತು ಶಿಕ್ಷಕರಿಗೆ ಸಲಹೆಗಳು:- ಪೋಷಕರು ಮಕ್ಕಳ ಮೊಬೈಲ್ ಬಳಕೆಯ ಮೇಲೆ ನಿಗಾ ಇಡಲು ಆಧಾರ್ ಆಧಾರಿತ ಮಾನಿಟರಿಂಗ್ ಆಪ್‌ಗಳನ್ನು ಬಳಸಲು ಉತ್ತೇಜಿಸಲಾಗುತ್ತಿದೆ.<br><br>➢ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಸೈಬರ್ ಕ್ರೈಂ ಕುರಿತು ಅರಿವು ಮೂಡಿಸಲು ಟಿ.ವಿ ಮಾಧ್ಯಮ, ದಿನಪತ್ರಿಕೆ, ಫೇಸ್‌ಬುಕ್ ಹಾಗೂ ಬ್ಯಾಂಕ್ ಅಧಿಕಾರಿಗಳ ಸಹಭಾಗಿತ್ವದಲ್ಲಿ ಮತ್ತು ಪೊಲೀಸ್ ಇಲಾಖೆಯ ಟ್ವಿಟರ್ ಮೂಲಕ ಜನರಿಗೆ ಸೈಬರ್ ಅಪರಾಧಗಳ ಕುರಿತು ಮುಂಜಾಗ್ರತೆ ಕ್ರಮಗಳ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ. |

| | | |
|---|---|---|
| | | ➢ ಇಂಟರ್ನೆಟ್/ಮೊಬೈಲ್ ಫೋನ್/ ಆನ್‌ಲೈನ್ ಮೂಲಕ & ಸಾಮಾಜಿಕ ಜಾಲತಾಣಗಳಲ್ಲಿ ವಂಚನೆಗೊಳಗಾಗುತ್ತಿರುವ ಅಪರಾಧ ಪ್ರಕರಣಗಳನ್ನು ಮಾಹಿತಿ ತಂತ್ರಜ್ಞಾನ ಕಾಯ್ದೆ, ಬಿಎನ್‌ಎಸ್ ಕಾಯ್ದೆ ಮತ್ತು ಕೆಪಿ ಆಕ್ಟ್ ಕಾಯ್ದೆಯಡಿ ಕ್ರಮ ಕೈಗೊಳ್ಳಲಾಗುತ್ತಿದೆ.<br><br>➢ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಸಾಮಾಜಿಕ ಜಾಲತಾಣಗಳಾದ ಸೈಬರ್ ಠಾಣೆಯ ಎಕ್ಸ್ ಖಾತೆ ಫೇಸ್‌ಬುಕ್ ಖಾತೆಗಳಲ್ಲಿ ಆನ್‌ಲೈನ್ ವಂಚನೆಯ ಬಗ್ಗೆ ಮುಂಜಾಗೃತಾ ಕ್ರಮಗಳನ್ನು ಅನುಸರಿಸುವ ಬಗ್ಗೆ ಪೋಸ್ಟ್‌ಗಳನ್ನು/ ಜಾಹಿರಾತುಗಳನ್ನು ಪೋಸ್ಟ್ ಮಾಡಿ ಜಾಗೃತಿ ಮೂಡಿಸಲಾಗುತ್ತಿದೆ.<br><br>➢ ಮಕ್ಕಳಿಗೆ ಮೊಬೈಲ್‌ಗಳನ್ನು ನೀಡದಂತೆ ಹಾಗೂ ಮಕ್ಕಳು ಮೊಬೈಲ್ ಬಳಕೆಯ ಸಂದರ್ಭದಲ್ಲಿ ಅವರುಗಳ ಮೇಲೆ ನಿಗಾವಣೆ ವಹಿಸುವಂತೆ ಪೋಷಕರಲ್ಲಿ ಜಾಗೃತಿ ಮೂಡಿಸಲಾಗುತ್ತಿರುತ್ತದೆ. |
| ಆ) | ಇತ್ತೀಚಿನ ದಿನಗಳಲ್ಲಿ ಶಾಲೆಗೆ ಹೋಗುವ ಮಕ್ಕಳಲ್ಲಿ ಮೊಬೈಲ್ ಮತ್ತು ಇಂಟರ್ನೆಟ್ ಬಳಕೆ ಹೆಚ್ಚಾಗುತ್ತಿದ್ದು, ಇದರಿಂದ ಕಣ್ಣು ಸಮಸ್ಯೆ ಆಗುವುದಲ್ಲದೇ ಆರೋಗ್ಯದಲ್ಲೂ ಸಹ ಸಮಸ್ಯೆಗಳು ಉಂಟಾಗುತ್ತಿರುವುದರಿಂದ ಸರ್ಕಾರ ವತಿಯಿಂದ ಶಾಲೆಗಳಲ್ಲಿ ಸಂಪೂರ್ಣವಾಗಿ ಮೊಬೈಲ್ ನಿಷೇಧ ಕಾನೂನು ಜಾರಿಗೆ ತರಲು ಯೋಜಿಸಿದೆಯೇ; ಇದ್ದಲ್ಲಿ ಯಾವಾಗ ಈ ಕಾನೂನು ಜಾರಿಗೆ ಬರುವುದು; ಮಾಹಿತಿ ನೀಡುವುದು; | ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳಲ್ಲಿ ಮೊಬೈಲ್ ಫೋನ್‌ಗಳು ಹಾಗೂ ಇತರ ಡಿಜಿಟಲ್ ಸಾಧನಗಳ ಅತಿಯಾದ ಹಾಗೂ ಅನಿಯಂತ್ರಿತ ಬಳಕೆಯಿಂದಾಗಿ ಓದುವಿಕೆಯಲ್ಲಿ ಗಣನೀಯ ಕುಸಿತ ಓದಿನಲ್ಲಿ ಆಸಕ್ತಿ ಕುಂಠಿತವಾಗುತ್ತಿರುವುದು ಹಾಗೂ ಏಕಾಗ್ರತೆಗೆ ಹಿನ್ನಡೆಯಾಗುತ್ತಿರುವುದು ಕೂಡ ಕಂಡು ಬಂದಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ:ಇಡಿ 226 ಎಸ್‌ಎಲ್‌ಬಿ 2007, ದಿನಾಂಕ:05.10.2007ರಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಅನ್ವಯವಾಗುವಂತೆ ಶಾಲಾ ಅವಧಿಯಲ್ಲಿ ಹಾಗೂ ಶಾಲಾ ಕಾಲೇಜುಗಳ ಆವರಣದಲ್ಲಿ ಮೊಬೈಲ್ ಬಳಕೆಯನ್ನು ನಿಷೇಧಿಸಲಾಗಿರುತ್ತದೆ. ಸುತ್ತೋಲೆ ಸಂಖ್ಯೆ:ಇಪಿ 375 ಪಿಜಿಸಿ 2025, ದಿನಾಂಕ:28.01.2026ರಲ್ಲಿ ವಿದ್ಯಾರ್ಥಿಗಳಲ್ಲಿ ಓದುವ ಅಭಿರುಚಿ ಬೆಳೆಸಲು "ಮೊಬೈಲ್ ಬಳಕೆ ನಿಯಂತ್ರಿಸುವ ಉದ್ದೇಶದಿಂದ ಮೊಬೈಲ್ ಬಿಡಿ ಪುಸ್ತಕ ಹಿಡಿ" ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.<br><br>ಮುಂದುವರೆದು, 2026-27ನೇ ಸಾಲಿನ ಆಯವ್ಯಯದ ಭಾಷಣದ ಕಂಡಿಕೆ 118ರಲ್ಲಿ "ಹೆಚ್ಚುತ್ತಿರುವ ಮೊಬೈಲ್ ಬಳಕೆಯಿಂದ ಮಕ್ಕಳ ಮೇಲೆ ಬೀರುವ ಅಡ್ಡ ಪರಿಣಾಮಗಳನ್ನು ತಡೆಗಟ್ಟುವ ಉದ್ದೇಶದಿಂದ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣದ ಬಳಕೆಯನ್ನು ನಿಷೇಧಿಸಲಾಗುವುದು" ಎಂದು |

| | | |
|---|---|---|
| | | ಘೋಷಿಸಲಾಗಿದೆ. ಇದರ ಬಗ್ಗೆ ನೀತಿಯನ್ನು ರೂಪಿಸಲು ಕ್ರಮವಹಿಸಲಾಗುತ್ತಿದೆ. |
| ಇ) | ಮಹಿಳಾ ಉದ್ಯಮಿಗಳಿಗೆ, ವಿಶೇಷವಾಗಿ ಗ್ರಾಮೀಣ, ಸ್ವಸಹಾಯ ಗುಂಪು ವಲಯಗಳಲ್ಲಿ ಆರ್ಥಿಕ ನೆರವು, ತರಬೇತಿ ಮತ್ತು ಮಾರುಕಟ್ಟೆ ಪ್ರವೇಶವನ್ನು ಒದಗಿಸಲು "ಉದ್ಯೋಗಿನಿ" ಯೋಜನೆಯಡಿಯಲ್ಲಿ ಯಾವ ಹೊಸ/ವಿಸ್ತರಿಸಬಹುದಾದ ಯೋಜನೆಗಳನ್ನು ಸರ್ಕಾರದ ವತಿಯಿಂದ ಪರಿಚಯಿಸಲಾಗುವುದು? | ಉದ್ಯೋಗಿನಿ ಯೋಜನೆಯಡಿಯಲ್ಲಿ ಹೊಸ/ವಿಸ್ತರಿಸಬಹುದಾದ ಯೋಜನೆಗಳನ್ನು ಸರ್ಕಾರದ ವತಿಯಿಂದ ಪರಿಚಯಿಸಲಾಗಿರುವುದಿಲ್ಲ.<br><br>ಆದರೆ, 2025-26ನೇ ಸಾಲಿನಲ್ಲಿ ಗೃಹಲಕ್ಷ್ಮೀ ಡಿಜಿಟಲ್ ಮಾರ್ಕೆಟಿಂಗ್ ಆಪ್ ಅನ್ನು ಜಾರಿಗೆ ತಂದಿದ್ದು, ಮಹಿಳೆಯರು ಉತ್ಪಾದಿಸಿದ ವಸ್ತುಗಳಿಗೆ ಆನ್‌ಲೈನ್ ಮಾರುಕಟ್ಟೆ ವ್ಯವಸ್ಥೆಯನ್ನು ಒದಗಿಸುವ ಉದ್ದೇಶದಿಂದ ಗೃಹಲಕ್ಷ್ಮೀ ಡಿಜಿಟಲ್ ಮಾರ್ಕೆಟಿಂಗ್ ಆಪ್‌ನಲ್ಲಿ ರಾಜ್ಯದಲ್ಲಿ ಪ್ರಸ್ತುತ ಒಟ್ಟು 2185 ಮಹಿಳಾ ಉದ್ಯಮಿಗಳನ್ನು ನೊಂದಣಿ ಮಾಡಿಕೊಂಡಿರುತ್ತಾರೆ. |

**ಸಂಖ್ಯೆ: ಹೆಚ್‌ಡಿ 53 ಪಿಸಿಕ್ಯೂ 2026**

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು